# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 24 |
| ಸದಸ್ಯರ ಹೆಸರು | : | ಶ್ರೀ ಎನ್ ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರು) |
| ಉತ್ತರಿಸಬೇಕಾದ ದಿನಾಂಕ | : | 16.07.2019 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ). ರಾಜ್ಯದಲ್ಲಿ 2018-19ರ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ಮಕ್ಕಳಿಗೆ ಎಷ್ಟು ಜೊತೆ ಸಮವಸ್ತ್ರ ವಿತರಿಸಲಾಗಿದೆ; ಎಷ್ಟು ಜೊತೆ ಸಮವಸ್ತ್ರ ವಿತರಿಸಲು ಬಾಕಿ ಇದೆಯೇ; | ರಾಜ್ಯದಲ್ಲಿ 2018-19ರ ಶೈಕ್ಷಣಿಕ ಸಾಲಿನಲ್ಲಿ 44.57 ಲಕ್ಷ ಮಕ್ಕಳಿಗೆ ಒಂದು ಜೊತೆ ಸಮವಸ್ತ್ರ ವಿತರಿಸಲಾಗಿದೆ.<br>ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ವಿತರಿಸಲಾಗುತ್ತಿರುವ 2ನೇ ಜೊತೆ ಸಮವಸ್ತ್ರವನ್ನು ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗದ ಕಾರಣ ವಿತರಿಸಲಾಗಿರುವುದಿಲ್ಲ. |
| (ಆ) 2019-20ನೇ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ಜೊತೆ ಸಮವಸ್ತ್ರ ವಿತರಿಸಲಾಗುತ್ತಿದೆ; | ರಾಜ್ಯ ಸರ್ಕಾರದ ವತಿಯಿಂದ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪ್ರತಿ ವಿದ್ಯಾರ್ಥಿಗೆ ಒಂದು ಜೊತೆ ಸಮವಸ್ತ್ರ ವಿತರಿಸಲಾಗುತ್ತಿದೆ. |
| (ಇ) ಕೇಂದ್ರ ಸರ್ಕಾರದ ಸಮಗ್ರ ಶಿಕ್ಷಣ ಯೋಜನೆಯ ಅನ್ವಯ ಶಾಲಾ ಮಕ್ಕಳಿಗೆ ಒಟ್ಟು ಎಷ್ಟು ಜೊತೆ ಸಮವಸ್ತ್ರ ವಿತರಿಸಬೇಕಾಗಿದೆ; ಈ ಸಮವಸ್ತ್ರಗಳನ್ನು ವಿತರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; 2018-19ನೇ ಸಾಲಿನಲ್ಲಿ ವಿತರಿಸಲು ಬಾಕಿ ಇರುವ ಸಮವಸ್ತ್ರವನ್ನು ಈ ಶೈಕ್ಷಣಿಕ ವರ್ಷದಲ್ಲಿ ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಸಮಗ್ರ ಶಿಕ್ಷಣ ಯೋಜನೆಯ ಅನ್ವಯ ಶಾಲಾ ಮಕ್ಕಳಿಗೆ 2ನೇ ಜೊತೆ ಸಮವಸ್ತ್ರ ವಿತರಿಸಬೇಕಾಗಿದೆ;<br>ಕೇಂದ್ರ ಮಾನವ ಸಂಪನ್ಮೂಲ ಸಚಿವಾಲಯದಿಂದ ಅನುದಾನ ಬಿಡುಗಡೆಯಾದಲ್ಲಿ 2ನೇ ಜೊತೆ ಸಮವಸ್ತ್ರ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತದೆ.<br>2018-19ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಬೇಕಾಗಿದ್ದ 2ನೇ ಜೊತೆ ಸಮವಸ್ತ್ರದ ಅನುದಾನ ಪ್ರಸಕ್ತ ಸಾಲಿನಲ್ಲಿ ಬಿಡುಗಡೆಯಾದರೆ 2018-19ನೇ ಸಾಲಿನಲ್ಲಿ ವಿತರಿಸಲು ಬಾಕಿ ಇರುವ ಸಮವಸ್ತ್ರವನ್ನು ಪ್ರಸಕ್ತ ಸಾಲಿನಲ್ಲಿ ವಿತರಿಸಲಾಗುತ್ತದೆ. |

**ಸಂಖ್ಯೆ: ಇಪಿ 58 ಯೋಯೋಕ 2019**

(ಎಸ್.ಆರ್.ಶ್ರೀನಿವಾಸ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು